# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ

| ಭಾಗ – ೧<br>Part – I | ಬೆಂಗಳೂರು, ಮಂಗಳವಾರ, ೧೧, ಆಗಸ್ಟ್, ೨೦೨೬ (ಶ್ರಾವಣ, ೨೦, ಶಕವರ್ಷ, ೧೯೪೮)<br>BENGALURU, TUESDAY, 11, AUGUST, 2026 ( SHRAVANA , 20, SHAKAVARSHA, 1948) | ನಂ. ೬೦೮<br>No. 608 |
|---|---|---|

### ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ ಯೋಜನೆಯನ್ನು ಸಮಗ್ರವಾಗಿ ಪರಿಶೀಲಿಸಿ ವರದಿ ನೀಡಲು ಸಮಿತಿಯನ್ನು ರಚಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ನಅಇ 97 ಬಿಎಂಆರ್ 2006, ದಿನಾಂಕ:18.10.2006.
2. ಅಧಿಸೂಚನೆ ಸಂಖ್ಯೆ: ಬಿಎಂಆರ್‌ಡಿಎ/ ಸ್ಯಾಟ್.ಟೌನ್ / ಐಟಿ/ ಬಿಟಿ/ 2005-06, ದಿನಾಂಕ: 29.11.2006
3. ಸರ್ಕಾರದ ಆದೇಶ ಸಂಖ್ಯೆ: ನಅಇ 63 ಬಿಎಂಆರ್ 2026(ಇ), ಬೆಂಗಳೂರು, ದಿನಾಂಕ: 07.05.2026.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ, ಬೆಂಗಳೂರು ಮಹಾನಗರ ಪ್ರದೇಶದ ಸಮತೋಲನ ಬೆಳವಣಿಗೆಯಿಂದಾಗಿ ಬೆಂಗಳೂರು ನಗರದ ಮೇಲಿನ ಸಾರಿಗೆ ಮತ್ತು ಸಂಪರ್ಕ ಹಾಗೂ ಸಾರ್ವಜನಿಕ ಸೌಲಭ್ಯಗಳ ಮೇಲಿರುವ ತೀವ್ರ ಒತ್ತಡವನ್ನು ಗಣನೀಯವಾಗಿ ಕಡಿತಗೊಳಿಸಿ, ನಗರ ನಿವಾಸಿಗಳ ಜೀವನ ಮಟ್ಟವನ್ನು ಸುಧಾರಿಸಲು Work-Live-Play ಮಾದರಿಯಲ್ಲಿ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ವ್ಯಾಪ್ತಿಯಲ್ಲಿ 5 ಹೊಸ ಸಮಗ್ರ ಉಪನಗರಗಳನ್ನು ನಿರ್ಮಿಸಲು ಪ್ರದೇಶಗಳನ್ನು ಗುರುತಿಸಿ, ಪ್ರಥಮ ಹಂತದಲ್ಲಿ ಬಿಡದಿ ಉಪನಗರ ಯೋಜನೆಯನ್ನು ಪ್ರಾಯೋಗಿಕವಾಗಿ ಕೈಗೆತ್ತಿಕೊಳ್ಳಲು ಸರ್ಕಾರದ ಅನುಮೋದನೆ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ಅಧಿಸೂಚನೆಯಲ್ಲಿ ಬಿಡದಿ ಉಪನಗರ ಯೋಜನೆಗಾಗಿ ಗುರುತಿಸಿರುವ ಗ್ರಾಮಗಳಲ್ಲಿ ಯಾವುದೇ ಪ್ರಾಧಿಕಾರವಾಗಲೀ ಅಥವಾ ವ್ಯಕ್ತಿಯಾಗಲೀ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಪೂರ್ವಾನುಮತಿ ಪಡೆಯದೇ ಯಾವುದೇ ರೀತಿಯ ಅಭಿವೃದ್ಧಿಗೆ ಅನುಮತಿಸತಕ್ಕದ್ದಲ್ಲ ಅಥವಾ ಕೈಗೊಳ್ಳತಕ್ಕದ್ದಲ್ಲವೆಂದು ಆದೇಶಿಸಲಾಗಿರುತ್ತದೆ.

ಆದರೆ, ಇತ್ತೀಚಿನ ದಿನಗಳಲ್ಲಿ ಬೆಂಗಳೂರಿನ ಸಮೀಪದಲ್ಲಿ ಬಂಡವಾಳ ಹೂಡಿಕೆಗೆ ಬೇಡಿಕೆ ಹೆಚ್ಚಾದ ಕಾರಣ, ನೆನೆಗುದಿಗೆ ಬಿದ್ದಿದ್ದ ಬಿಡದಿ ಬಳಿ ಸಮಗ್ರ ಉಪನಗರ ಯೋಜನೆಯನ್ನು ಜನವಸತಿ ಪ್ರದೇಶಗಳ ಕನಿಷ್ಠ ಸ್ಥಳಾಂತರ ಮತ್ತು ಭೂಮಾಲೀಕರನ್ನು ಯೋಜನೆಯ ಪಾಲುದಾರರನ್ನಾಗಿಸಿ ಅನುಷ್ಠಾನಗೊಳಿಸಲು ತೀರ್ಮಾನಿಸಿ, ಮೇಲೆ ಓದಲಾದ ಕ್ರಮಸಂಖ್ಯೆ (3) ರ ಆದೇಶದಲ್ಲಿ, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಬೆಂಗಳೂರು ದಕ್ಷಿಣ ಜಿಲ್ಲೆ, ರಾಮನಗರ ತಾಲ್ಲೂಕು, ಬಿಡದಿ ಹೋಬಳಿ, ಬೈರಮಂಗಲ, ಬನ್ನಿಗಿರಿ, ಹೊಸೂರು, ಕೆ.ಜಿ ಗೊಲ್ಲರಪಾಳ್ಯ, ಕಂಚುಗಾರನಹಳ್ಳಿ, ಅರಳಾಳುಸಂದ್ರ, ಕೆಂಪಯ್ಯನಪಾಳ್ಯ, ಮಂಡಲಹಳ್ಳಿ ಹಾಗೂ ಹಾರೋಹಳ್ಳಿ ತಾಲ್ಲೂಕು, ಹಾರೋಹಳ್ಳಿ ಹೋಬಳಿಯ ವಡೇರಹಳ್ಳಿ ಭಾಗಶಃ ಒಟ್ಟು 09 ಗ್ರಾಮಗಳ ಸುಮಾರು 7481 ಎಕರೆ – 21.08 ಗುಂಟೆ ಪ್ರದೇಶದಲ್ಲಿ ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ ಯೋಜನೆಯನ್ನು ಅಂದಾಜು ರೂ. 18,133 ಕೋಟಿ ಮೊತ್ತದಲ್ಲಿ ಅನುಷ್ಠಾನಗೊಳಿಸಲು ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ 1987ರ ಕಲಂ 18(3) ರಡಿ ಅನುಮೋದನೆ ನೀಡಿ ಆದೇಶಿಸಲಾಗಿದೆ.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



ಪ್ರಸ್ತುತ, ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ ಯೋಜನೆಯ ವ್ಯಾಪ್ತಿಗೊಳಪಡುವ (1)ಕೆಂಪಯ್ಯನಪಾಳ್ಯ (2) ವಡೇರಹಳ್ಳಿ ಮ (3) ಮಂಡಲಹಳ್ಳಿ (4) ಕೆ.ಜಿ.ಗೊಲ್ಲರಪಾಳ್ಯ (5) ಬನ್ನಿಗಿರಿ (6) ಅರಳಾಳುಸಂದ್ರ ಹಾಗೂ (7) ಹೊಸೂರು ಗ್ರಾಮಗಳ ಒಟ್ಟು 5461 ಎಕರೆ -05 ಗುಂಟೆ ವಿಸ್ತೀರ್ಣದ ಜಮೀನುಗಳಿಗೆ ಅಂತಿಮ ಅಧಿಸೂಚನೆಗಳನ್ನು ಹೊರಡಿಸಲಾಗಿದ್ದು ಭೂಮಾಲೀಕರುಗಳಿಗೆ ಪರಿಹಾರ ನೀಡುವ ಕಾರ್ಯ ಪ್ರಗತಿಯಲ್ಲಿರುತ್ತದೆ.

ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ ಯೋಜನೆಯ ಅನುಷ್ಠಾನದ ಬಗ್ಗೆ ಸಮಾಜದ ವಿವಿಧ ಅಂಗಗಳಿಂದ ವಿಭಿನ್ನವಾದ ಪ್ರತಿಕ್ರಿಯೆಗಳು ವ್ಯಕ್ತವಾಗುತ್ತಿರುವ ಹಿನ್ನೆಲೆಯಲ್ಲಿ, ಸದರಿ ಯೋಜನೆಯನ್ನು ಸಮಗ್ರ ಪರಿಶೀಲನೆಗೊಳಪಡಿಸಿ ಸೂಕ್ತ ನಿಲುವು ತೆಗೆದುಕೊಳ್ಳಲು ಸರ್ಕಾರವು ಸಮಿತಿಯನ್ನು ರಚಿಸಲು ನಿರ್ಧರಿಸಿ, ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: ನಅಇ 408 ಬಿಎಂಆರ್ 2026(ಇ),</u>

<u>ಬೆಂಗಳೂರು ದಿನಾಂಕ: 10.08.2026</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ ಯೋಜನೆಯನ್ನು ಸಮಗ್ರ ಪರಿಶೀಲನೆಗೊಳಪಡಿಸಿ ಸರ್ಕಾರಕ್ಕೆ ವರದಿ ಸಲ್ಲಿಸಲು ಈ ಕೆಳಕಂಡಂತೆ ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ.

| ಕ್ರ.ಸಂ. | ಶ್ರೀಯುತರ ಹೆಸರು | - |
|---|---|---|
| 1 | ಗೌರವಾನ್ವಿತ ಶ್ರೀ ಜಸ್ಟೀಸ್ ಗುಹನಾಥನ್ ನರೇಂದರ್, ವಿಶ್ರಾಂತ ಮುಖ್ಯ ನ್ಯಾಯಮೂರ್ತಿಯವರು, | ಅಧ್ಯಕ್ಷರು |
| 2 | ಶ್ರೀ ಎಸ್. ವಿ ರಂಗನಾಥ್, ಭಾ.ಆ.ಸೇ(ನಿ), ನಿವೃತ್ತ ಮುಖ್ಯ ಕಾರ್ಯದರ್ಶಿ, | ಸದಸ್ಯರು |
| 3 | ಶ್ರೀ ಎಸ್.ಆರ್. ಉಮಾಶಂಕರ್, ಭಾ.ಆ.ಸೇ.(ನಿ), ನಿವೃತ್ತ ಅಪರ ಮುಖ್ಯ ಕಾರ್ಯದರ್ಶಿ, | ಸದಸ್ಯರು |
| 4 | ಶ್ರೀ ಪ್ರಸನ್ನ ಕುಮಾರ್, ಭಾ.ಆ.ಸೇ.(ನಿ), | ಸದಸ್ಯ ಕಾರ್ಯದರ್ಶಿ |

ಕಾರ್ಯಸೂಚಿಗಳು:-

1. ಸಮಿತಿಯು ಸದರಿ ಯೋಜನೆಯನ್ನು ಕಾನೂನಾತ್ಮಕ, ಮಾನವೀಯತೆ ಹಾಗೂ ಸಮಗ್ರ ಅಭಿವೃದ್ಧಿಯ ಚೌಕಟ್ಟಿನಲ್ಲಿ ವಿಶ್ಲೇಷಣೆಗೊಳಪಡಿಸುವುದು.
2. ಯೋಜನೆಯ ಕುರಿತು ಸಮಾಜದ ವಿವಿಧ ಅಂಗಗಳು ವ್ಯಕ್ತಪಡಿಸುತ್ತಿರುವ ವಿಭಿನ್ನ ಅಭಿಪ್ರಾಯಗಳ ಬಗ್ಗೆ ಪರಿಶೀಲಿಸಿ, ಸೂಕ್ತ ಶಿಫಾರಸ್ಸು ಮಾಡುವುದು.
3. ಸದರಿ ಸಮಿತಿಯು 30 ದಿನಗಳೊಳಗಾಗಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವುದು.

ಮುಂದುವರೆದು, ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರರವರು ಸದರಿ ಸಮಿತಿಗೆ ಅಗತ್ಯ ಸಹಕಾರವನ್ನು ಹಾಗೂ ಸ್ಥಳಾವಕಾಶವನ್ನು ಮತ್ತು ಅಗತ್ಯ ವಾಹನ ಸೌಲಭ್ಯವನ್ನು ಕಲ್ಪಿಸಿ ಅಗತ್ಯ ಸಿಬ್ಬಂದಿಗಳ ನೆರವನ್ನು ನೀಡತಕ್ಕದ್ದು. ಸದರಿ ಸಮಿತಿಯ ಅಧ್ಯಕ್ಷರು ಹಾಗೂ ಸದಸ್ಯರುಗಳು ಗೌರವ ಧನ ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ರಾಜೇಶ್ ಎಸ್.ಸೂಳಿಕೇರಿ)**
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ,
(ಬಿ.ಡಿ.ಎ & ಬೆಂ-1).

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

P S BASAVARAJU